ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	458
ಮಾನ್ಯ ಸದಸ್ಯರ ಹೆಸರು	ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ (ಕಿತ್ತೂರು)
ಉತ್ತರಿಸಬೇಕಾದ ದಿನಾಂಕ	23.02.2022
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕಿತ್ತೂರು ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ದೇವಸ್ಥಾನಗಳ ಪಕ್ಕ ಸಮುದಾಯ ಭವನ ನಿರ್ಮಾಣಕ್ಕೆ ಪ್ರಸ್ತಾವನೆ ಇರುವುದು ನಿಜವಲ್ಲವೇ;	ಹೌದು, ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ ಮಾನ್ಯ ವಿಧಾನಸಭಾ ಸದಸ್ಯರು ಕಿತ್ತೂರು ವಿಧಾನಸಭಾ ಕ್ಷೇತ್ರ ಇವರು ಕಿತ್ತೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ದೇವಸ್ಥಾನಗಳ ಹತ್ತಿರ 12 ಸಮುದಾಯ ಭವನಗಳ ನಿರ್ಮಾಣಕ್ಕೆ ಸಹಾಯಧನ ಮಂಜೂರು ಮಾಡಲು ಕೋರಿ ಮನವಿ ಪತ್ರ ಸಲ್ಲಿಸಿರುತ್ತಾರೆ
ಆ)	ಸದರಿ ಪ್ರಸ್ತಾವನೆಗಳು ಯಾವುವು ಮತ್ತು ಸರ್ಕಾರದ ಯಾವ ಹಂತದಲ್ಲಿದೆ;	ಸದರಿ ಮನವಿಯಲ್ಲಿ ಕೋರಿರುವ ಸಮುದಾಯ ಭವನಗಳ ವಿವರ ಅನುಬಂಧ-1ರಲ್ಲಿ ನೀಡಲಾಗಿದೆ. ಸದರಿ ಸ್ಥಳಗಳಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ ಸಹಾಯಧನ ಮಂಜೂರು ಮಾಡುವ ಬಗ್ಗೆ ಸರ್ಕಾರದ ಮಾರ್ಗಸೂಚಿಗಳನ್ವಯ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಯಿಂದ ಸದರಿ ಸಂಸ್ಥೆಗಳಿಗೆ ಪತ್ರ ಬರೆಯಲಾಗಿರುತ್ತದೆ. ಸದರಿ ಸಂಸ್ಥೆಗಳ ವತಿಯಿಂದ ಜಿಲ್ಲಾ ಕಛೇರಿಗೆ ಈವರೆವಿಗೂ ಅಗತ್ಯ ದಾಖಲಾತಿಗಳೊಂದಿಗೆ ಪ್ರಸ್ತಾವನೆಗಳು ಸ್ವೀಕೃತವಾಗಿರುವುದಿಲ್ಲ.
ಇ)	ಸದರಿ ಪ್ರಸ್ತಾವನೆಗಳಿಗೆ ಅನುಮೋದನೆ ನೀಡಿ ಅನುದಾನ ಬಿಡುಗಡೆಗೆ ಸರ್ಕಾರದ ಕ್ರಮವೇನು?	ಸದರಿ ಸಂಸ್ಥೆಗಳ ವತಿಯಿಂದ ಮಾರ್ಗಸೂಚಿಗಳನ್ವಯ ಪ್ರಸ್ತಾವನೆಗಳು ಸ್ವೀಕೃತವಾದ ನಂತರ, ಸರ್ಕಾರದ ಮಾರ್ಗಸೂಚಿಗಳನ್ವಯ ಪರಿಶೀಲಿಸಿ ಸದರಿ ಸಂಸ್ಥೆಗಳು ಅರ್ಹತೆ ಹೊಂದಿದ್ದಲ್ಲಿ,ವಿವಿಧ ಸಮುದಾಯಗಳ ಅಭಿವೃದ್ಧಿ ಯೋಜನೆಯಡಿ ಒದಗಿಸುವ ಅನುದಾನ ಹಾಗೂ ರಾಜ್ಯದ ಒಟ್ಟಾರೆ ಬೇಡಿಕೆಯ ನ್ನಾಧರಿಸಿ ಸದರಿ ಸಮುದಾಯ ಭವನಗಳ ನಿರ್ಮಾಣಕ್ಕೆ ಸಹಾಯಧನ ಮಂಜೂರು ಮಾಡುವ ಬಗ್ಗೆ ಪರಿಶೀಲಿಸಲಾಗುವುದು.

ಸಂಖ್ಯೆ:ಹಿಂವಕ 110 ಬಿಎಂಎಸ್ 2022

(ಕೋಟ ಶ್ರೀನಿವಾಸ ಪೂಜಾರಿ)
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 458ಕ್ಕೆ ಅನುಬಂಧ:

ಕಿತ್ತೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ದೇವಸ್ಥಾನಗಳ ಪಕ್ಕ ಸಮುದಾಯ ಭವನ ಕಟ್ಟಡ ನಿರ್ಮಾಣಕ್ಕೆ ಸಹಾಯಧನ ಮಂಜೂರಾತಿ ಕೋರಿ ಸಲ್ಲಿಸಿರುವ ಮನವಿಯಲ್ಲಿನ ಸಂಸ್ಥೆಗಳ ವಿವರ.

ಕ್ರ. ಸಂ.	ಗ್ರಾಮ	ಸಂಸ್ಥೆಯ ಹೆಸರು ಮತ್ತು ವಿಳಾಸ	ಮನವಿಯಲ್ಲಿ ಕೋರಿರುವ ಮೊತ್ತ (ರೂ.ಲಕ್ಷಗಳಲ್ಲಿ)
1	2	3	4
1	ಕೊಳ್ಳಾನಟ್ಟಿ	ಶ್ರೀ ಬ್ರಹ್ಮಲಿಂಗೇಶ್ವರ ದೇವಸ್ಥಾನದ ಹತ್ತಿರ ಸಮುದಾಯ ಭವನ	12.00
2	ಗಜಮನಾಳ	ಶ್ರೀ ಮಲ್ಲಯ್ಯನ ದೇವಸ್ಥಾನದ ಹತ್ತಿರ ಸಮುದಾಯ ಭವನ	12.00
3	ಸಾಗರ	ಶ್ರೀ ವೀರಭದ್ರೇಶ್ವರ ದೇವಸ್ಥಾನದ ಹತ್ತಿರ ಸಮುದಾಯ ಭವನ	12.00
4	ನಾಗನೂರ	ಶ್ರೀ ಬಸವೇಶ್ವರ ದೇವಸ್ಥಾನದ ಹತ್ತಿರ ಸಮುದಾಯ ಭವನ	12.00
5	ಯರಗೊಪ್ಪ	ಶ್ರೀ ಧರೇದೊಳಪ್ಪ ದೇವಸ್ಥಾನದ ಹತ್ತಿರ ಸಮುದಾಯ ಭವನ	12.00
6	ಹಣ್ಣಿಕೇರಿ	ಶ್ರೀ ಚಿಕ್ಕಮೇಳೆ ದೇವಸ್ಥಾನದ ಹತ್ತಿರ ಸಮುದಾಯ ಭವನ	12.00
7	ಬಚ್ಚನಕೇರಿ	ಶ್ರೀ ಕಲ್ಮೇಶ್ವರ ದೇವಸ್ಥಾನದ ಹತ್ತಿರ ಸಮುದಾಯ ಭವನ	12.00
8	ಬೆನಚಿನಮರಡಿ	ಶ್ರೀ ಗ್ರಾಮದೇವಿ ದೇವಸ್ಥಾನದ ಹತ್ತಿರ ಸಮುದಾಯ ಭವನ	12.00
9	ಗದ್ದಿಕರವಿಕೊಪ್ಪ	ಶ್ರೀ ಹನುಮಾನ ದೇವಸ್ಥಾನದ ಹತ್ತಿರ ಸಮುದಾಯ ಭವನ	12.00
10	ಬೈರನಟ್ಟಿ	ಶ್ರೀ ಬಸವೇಶ್ವರ ದೇವಸ್ಥಾನದ ಹತ್ತಿರ ಸಮುದಾಯ ಭವನ	12.00
11	ದೇವರಶೀಗಿಹಳ್ಳಿ	ಶ್ರೀ ದುರ್ಗಾದೇವಿ ದೇವಸ್ಥಾನದ ಹತ್ತಿರ ಸಮುದಾಯ ಭವನ	12.00
12	ಕಿತ್ತೂರು	ಶ್ರೀ ಕರೇಮ್ಮಾದೇವಿ ದೇವಸ್ಥಾನದ ಹತ್ತಿರ ಸಮುದಾಯ ಭವನ	18.00

8/12

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	462
ಸದಸ್ಯರ ಹೆಸರು	ಶ್ರೀ ರಾಮಪ್ಪ ಎಸ್. (ಹರಿಹರ)
ಉತ್ತರಿಸಬೇಕಾದ ದಿನಾಂಕ	23.02.2022

ಕ್ರಸಂ	ಪ್ರಶ್ನೆಗಳು	ಉತ್ತರ
ಅ.	ಹರಿಹರ ವಿಧಾನಸಭಾ ಕ್ಷೇತ್ರದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ರೂ.10.00 ಕೋಟಿ ಹಾಗೂ ರೂ.15.00 ಕೋಟಿಗಳನ್ನು ಮಂಜೂರು ಮಾಡುವಂತೆ ಕೋರಿ ಸಲ್ಲಿಸಿರುವ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು, ಬಂದಿರುತ್ತದೆ.
ಆ	ಬಂದಿದ್ದಲ್ಲಿ, ಪ್ರಸ್ತಾವನೆ ಯಾವ ಹಂತದಲ್ಲಿದೆ; ಯಾವ ಕಾಲಮಿತಿಯೊಳಗೆ ಅನುದಾನ ಮಂಜೂರು ಮಾಡಲಾಗುವುದು? (ಸಂಪೂರ್ಣ ವಿವರ ನೀಡುವುದು)	2021-22ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ದಾವಣಗೆರೆ ಜಿಲ್ಲೆಯ ಹರಿಹರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ರಸ್ತೆ ಕಾಮಗಾರಿಗಳನ್ನು ಅಭಿವೃದ್ಧಿ ಪಡಿಸಲು ರೂ. 5.00 ಕೋಟಿಗಳನ್ನು ಮಂಜೂರಾತಿ ನೀಡಲಾಗಿರುತ್ತದೆ. ವಿವರಗಳನ್ನು **ಅನುಬಂಧ-1ರಲ್ಲಿ** ಲಗತ್ತಿಸಿದೆ. ಉಳಿಕೆ ಪ್ರಸ್ತಾವನೆಗೆ ಅನುದಾನವನ್ನು ಹಂಚಿಕೆ ಮಾಡುವಂತೆ ಆರ್ಥಿಕ ಇಲಾಖೆಯನ್ನು ಕೋರಲಾಗಿದೆ. ಆರ್ಥಿಕ ಇಲಾಖೆಯು ಹಂಚಿಕೆ ಮಾಡುವ ಅನುದಾನದ ಲಭ್ಯತೆಯನ್ನಾಧರಿಸಿ ರಸ್ತೆ ಕಾಮಗಾರಿಗಳನ್ನು ಅಭಿವೃದ್ಧಿ ಪಡಿಸಲು ಕ್ರಮ ಕೈಗೊಳ್ಳಬೇಕಿದೆ.

ಸಂಖ್ಯೆ: ಗ್ರಾಅಪ:15ನೇವಿಸ:200/18:ಆರ್.ಆರ್.ಸಿ:2021

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಅನುಬಂಧ-1

I/170905/2021

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2021-22 ನೇ ಸಾಲಿನಲ್ಲಿ ದಾವಣಗೆರೆ ಜಿಲ್ಲೆ ಹರಿಹರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:

1. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 45 ವೆಚ್ಚ-6/2021, ದಿ: 04.03.2021
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಅನುಮೋದಿಸಿದಂತೆ.
3. ಸರ್ಕಾರದ ಪತ್ರ ಸಂ: ಗ್ರಾಅಪ 42 (11) ಆರ್‌ಆರ್‌ಸಿ 2021, ದಿ: 16.07.2021
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ದಾವಣಗೆರೆ ಇವರ ಪತ್ರ ಸಂಖ್ಯೆ: ಜಿಪಂದಾ/ಅಭಿ(5)ರಸ್ತೆ/ಸಿಆರ್-20/2021-22, ದಿ: 17.08.2021

******

ಪ್ರಸ್ತಾವನೆ:

2021-22ನೇ ಸಾಲಿಗೆ ಲೆಕ್ಕ ಶೀರ್ಷಿಕೆ 5054 ರಡಿ ದಾವಣಗೆರೆ ಜಿಲ್ಲೆ ಹರಿಹರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ರೂ. 5.00 ಕೋಟಿಗಳ ಮೊತ್ತದಲ್ಲಿ ಕೈಗೊಳ್ಳಲು ಪ್ರಸ್ತಾವನೆಯನ್ನು ಗಮನಿಸಿದೆ.

ಓದಲಾದ-1 ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ದಾವಣಗೆರೆ ಜಿಲ್ಲೆ ಹರಿಹರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ಅಭಿವೃದ್ಧಿ ಪಡಿಸಲು ರೂ. 5.00 ಕೋಟಿಗಳನ್ನು ಹಂಚಿಕೆ ಮಾಡಲು ಆದೇಶಿಸಿರುವ ಮೇರೆಗೆ ಆರ್ಥಿಕ ಇಲಾಖೆಯು ಕಾಮಗಾರಿಗಳು ರೂ. 5.00 ಕೋಟಿಗಳ ಮೊತ್ತದಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲು ಸಹಮತಿಸಿರುತ್ತದೆ.

ಓದಲಾದ -2 ರಲ್ಲಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಆರ್ಥಿಕ ಇಲಾಖೆಯು ದಾವಣಗೆರೆ ಜಿಲ್ಲೆ ಹರಿಹರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ಅಭಿವೃದ್ಧಿ ಪಡಿಸಲು ರೂ. 5.00 ಕೋಟಿಗಳನ್ನು ಹಂಚಿಕೆ ಮಾಡಿರುವುದನ್ನು ಅನುಮೋದಿಸಿದ್ದು, ಸದರಿ ಅನುದಾನಕ್ಕೆ ಮಾನ್ಯ ಶಾಸಕರು ಹರಿಹರ ವಿಧಾನಸಭಾ ಕ್ಷೇತ್ರ ರವರೊಂದಿಗೆ ಸಮಾಲೋಚಿಸಿ ಕಾಮಗಾರಿಗಳ ವಿವರಗಳನ್ನು ಪಡೆದು ಷರತ್ತುಬದ್ಧವಾಗಿ ನಿಯಮಾನುಸಾರ ಪರಿಶೀಲಿಸಿ ಆಡಳಿತಾತ್ಮಕ ಅನುಮೋದನೆಗೆ ಸರ್ಕಾರಕ್ಕೆ ಸಲ್ಲಿಸಲು ಓದಲಾದ-3 ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ದಾವಣಗೆರೆ ಜಿಲ್ಲಾ ಪಂಚಾಯತಿರವರನ್ನು ಕೋರಲಾಗಿತ್ತು.

ಓದಲಾದ-4 ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ದಾವಣಗೆರೆ ಜಿಲ್ಲಾ ಪಂಚಾಯತಿರವರು ದಾವಣಗೆರೆ ಜಿಲ್ಲೆ ಹರಿಹರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ರೂ. 4.80 ಕೋಟಿಗಳ ಮೊತ್ತದ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿ ಕ್ರಿಯಾ ಯೋಜನೆಯನ್ನು ಸಲ್ಲಿಸಿರುತ್ತಾರೆ.

ಅದರಂತೆ 2021-22ನೇ ಸಾಲಿಗೆ ಲೆಕ್ಕ ಶೀರ್ಷಿಕೆ 5054 ರಡಿ ದಾವಣಗೆರೆ ಜಿಲ್ಲೆ ಹರಿಹರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕೆಳಕಂಡ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ರೂ. 4.80 ಕೋಟಿಗಳ ಮೊತ್ತದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಮೂಲಕ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 42(11)-5 ಆರ್‌ಆರ್‌ಸಿ 2021, ಬೆಂಗಳೂರು,
ದಿನಾಂಕ: 27.09.2021

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ 2021-22 ನೇ ಸಾಲಿಗೆ ಲೆಕ್ಕ ಶೀರ್ಷಿಕೆ: 5054 ರಡಿ ದಾವಣಗೆರೆ ಜಿಲ್ಲೆ ಹರಿಹರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ರೂ. 4.80 ಕೋಟಿಗಳ (ರೂಪಾಯಿ ನಾಲ್ಕು ಕೋಟಿ ಎಂಭತ್ತು ಲಕ್ಷಗಳು ಮಾತ್ರ) ಮೊತ್ತದಲ್ಲಿ ಈ ಕೆಳಕಂಡ ಷರತ್ತಿಗಳಿಗೊಳಪಟ್ಟು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಮೂಲಕ ಅನುಷ್ಠಾನ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

ಕ್ರ. ಸಂ	ಕಾಮಗಾರಿಯ ವಿವರ	ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ)
1	ಹರಿಹರ ತಾ|| ಭಾನುವಳ್ಳಿ- ಕುಂಬಳೂರು ಕ್ಯಾಂಪ್ ರಸ್ತೆ ಸಿಸಿ ರಸ್ತೆ ನಿರ್ಮಾಣ	40.00
2	ಹರಿಹರ ತಾ|| ನಾಗೇನಹಳ್ಳಿ– ಹರಗನಹಳ್ಳಿರಸ್ತೆ 4.10 ಕಿಮೀನಲ್ಲಿ ಸೇತುವೆ ನಿರ್ಮಾಣ ರಸ್ತೆ ಅಭಿವೃದ್ಧಿ	80.00
3	ಹರಿಹರ ತಾ|| ಕೊಕ್ಕನೂರು ಗ್ರಾಮದ ಜಿ.ಟಿ ಕಟ್ಟೆ ಮುಖ್ಯ ರಸ್ತೆಯಿಂದ ಕೊಳದ ಮಲ್ಲೇಶ್ವರ ರಸ್ತೆ ಅಭಿವೃದ್ಧಿ	20.00

4	ಹರಿಹರ ತಾ|| ಹಾಲಿವಾಣ – ಕೊಪ್ಪ ರಸ್ತೆ ಅಭಿವೃದ್ಧಿ	35.00
5	ಹರಿಹರ ತಾ|| ಸಾರಥಿ-ಕರಲಹಳ್ಳಿ ರಸ್ತೆ ಸಿಸಿ ರಸ್ತೆ ಅಭಿವೃದ್ಧಿ	100.00
6	ಹರಿಹರ ತಾ|| ದೊಗ್ಗಳ್ಳಿ–ಆವರಗೊಳ್ಳ ರಸ್ತೆ ಅಭಿವೃದ್ಧಿ	25.00
7	ಹರಿಹರ ತಾ|| ಕುರುಬರಹಳ್ಳಿ– ಹೊಟ್ಟಿಗೇನಹಳ್ಳಿ ರಸ್ತೆ ಮೆಟ್ಲಿಂಗ್ ಕಾಮಗಾರಿ	15.00
8	ಹರಿಹರ ತಾ|| ಧೂಳಹೊಳೆ-ಇಂಗಳಗೊಂದಿ ರಸ್ತೆ ಅಭಿವೃದ್ಧಿ	40.00
9	ಹರಿಹರ ತಾ|| ಪಾಳ್ಯ-ವಾಸನ ರಸ್ತೆ ಅಭಿವೃದ್ಧಿ ಮತ್ತು ಡಾಂಬರೀಕರಣ	30.00
10	ಹರಿಹರ ತಾ|| ಕೊಪ್ಪ ತಿಮ್ಲಾಪುರ (ಹೊಳೆಹೊನ್ನೂರು) ರಸ್ತೆ ಅಭಿವೃದ್ಧಿ	15.00
11	ಹರಿಹರ ತಾ|| ದೇವರಬೆಳಕೆರೆ-ಸಾಲಕಟ್ಟೆ ರಸ್ತೆ ಅಭಿವೃದ್ಧಿ	30.00
12	ಹರಿಹರ ತಾ|| ವಾಸನ-ನಂದಿಗುಡಿ ರಸ್ತೆ ಅಭಿವೃದ್ಧಿ	25.00
13	ಹರಿಹರ ತಾ|| ಹಳೇ ಮಲ್ಲನಾಯಕನಹಳ್ಳಿ– ಮಲ್ಲನಾಯಕನಹಳ್ಳಿ ರಸ್ತೆ ಅಭಿವೃದ್ಧಿ	25.00
ಒಟ್ಟು		480.00

ಷರತ್ತುಗಳು:

1. ಈ ಮೇಲಿನ 13 ರಸ್ತೆ ಕಾಮಗಾರಿಗಳನ್ನು ಜಿಲ್ಲಾ ಪಂಚಾಯತಿ /ಕೆಆರ್‌ಐಡಿಎಲ್, ಇತರೆ ಯೋಜನೆಯಡಿ/ಕಾರ್ಯಕ್ರಮದಡಿ/ಲೆಕ್ಕ ಶೀರ್ಷಿಕೆಯಡಿ ಯಾವುದೇ ಕಾರಣಕ್ಕೂ ಪುನರಾವರ್ತನೆ ಯಾಗಿರುವುದಿಲ್ಲವೆಂಬ ಅಂಶವನ್ನು ದೃಢಪಡಿಸಿಕೊಳ್ಳತಕ್ಕದ್ದು.
2. ಈ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಮೂಲಕ ಅನುಷ್ಠಾನ ಮಾಡತಕ್ಕದ್ದು.
3. ಈ ಮೇಲಿನ 13 ಕಾಮಗಾರಿಗಳು ಡಿಆರ್‌ಆರ್‌ಪಿ ಪಟ್ಟಿಯಲ್ಲಿದ್ದು ಮತ್ತು ಅಭಿವೃದ್ಧಿ ಪಡಿಸಲು ಅರ್ಹವಾಗಿರುವುದನ್ನು ಖಚಿತಪಡಿಸಿಕೊಂಡು ರಸ್ತೆಯ ಉದ್ದ ಹಾಗೂ ಸೇತುವೆಗಳ ಅವಶ್ಯವಿರುವುದನ್ನು ಸ್ಥಳ ಪರಿಶೀಲನೆ ಮಾಡಿಕೊಂಡು, ವಾಸ್ತವಿಕವಾಗಿ ಪ್ರತಿ ಕಾಮಗಾರಿಗೆ ಬೇಕಾಗಿರುವ ವೆಚ್ಚಕ್ಕೆ ತಕ್ಕಂತೆ ಅಂದಾಜು ಪಟ್ಟಿಯನ್ನು ತಯಾರಿಸಿಕೊಂಡು ಸಕ್ಷಮ ಪ್ರಾಧಿಕಾರದ ತಾಂತ್ರಿಕ ಅನುಮೋದನೆಯನ್ನು ಪಡೆಯತಕ್ಕದ್ದು.
4. ಈ ಆದೇಶದಲ್ಲಿ ಕಾಮಗಾರಿಗಳನ್ನು ಸ್ಥಳ ಪರಿಶೀಲಿಸಿ ವಾಸ್ತವಿಕವಾಗಿ ಅಂದಾಜು ಪಟ್ಟಿಯನ್ನು ಸಿದ್ಧಪಡಿಸಿದ ನಂತರ ಉಳಿಕೆಯಾದ ಅನುದಾನದ ಬಗ್ಗೆ ಸರ್ಕಾರಕ್ಕೆ ಕಡ್ಡಾಯವಾಗಿ ವರದಿಸಲ್ಲಿಸತಕ್ಕದ್ದು.
5. ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಯ ಅಂದಾಜನ್ನು ನಿಯಮಾನುಸಾರ IRC ಮತ್ತಿತರೆ ತತ್ಸಮಾನ ತಾಂತ್ರಿಕ ನಿಬಂಧನೆಗಳಂತೆ ಪರಿಶೀಲನೆಗೆ ಒಳಪಡಿಸಿ ಸೂಕ್ತ ಪ್ರಾಧಿಕಾರದಿಂದ ಅನುಮೋದನೆ ಪಡೆಯತಕ್ಕದ್ದು.
6. ಡಿಪಿಆರ್ ತಯಾರಿಸುವಾಗ ಪ್ರತಿ 100.00 ಮೀ.ಗಳ ಛಾಯಾಚಿತ್ರವನ್ನು ಅಳವಡಿಸುವುದು ಕಡ್ಡಾಯವಾಗಿರುತ್ತದೆ.
7. ಕಾಮಗಾರಿಗಳನ್ನು ಕರ್ನಾಟಕ ಪಾರದರ್ಶಕತೆ ಕಾಯಿದೆ (ಕೆಟಿಪಿಪಿ) ಪ್ರಕಾರ ಟೆಂಡರ್ ಕರೆದು ಅನುಷ್ಠಾನ ಮಾಡತಕ್ಕದ್ದು.

I/170905/2021

8. ಪ್ರಸ್ತುತ ಈ ಲೆಕ್ಕ ಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸುತ್ತಿರುವ ಹೆಚ್ಚುವರಿ ರಸ್ತೆ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ ಮುಖಾಂತರ ಉಸ್ತುವಾರಿ ನೋಡಬೇಕಾಗಿದ್ದು, ಈ ಸಂಬಂಧ ಕಾಮಗಾರಿಗಳ ಪೂರ್ಣ ಮಾಹಿತಿಯನ್ನು ಗಾಂಧಿ ಸಾಕ್ಷಿ ಕಾಯಕ ವೆಬ್ ಸೈಟ್‌ನಲ್ಲಿ ತಪ್ಪದೇ ಅಳವಡಿಸುವುದು.

9. ಕಾಮಗಾರಿ ಪ್ರಾರಂಭಿಸುವ ಮುನ್ನ ಮತ್ತು ಮುಕ್ತಾಯದ ನಂತರ ರಸ್ತೆಯ ಛಾಯಾಚಿತ್ರಗಳನ್ನು ತೆಗೆದು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸತಕ್ಕದ್ದು.

10. ಕಾಮಗಾರಿಗಳನ್ನು 3rd party/SQM/DQM ರವರಿಂದ Three tire ತಪಾಸಣೆಗೆ ಒಳಪಡಿಸತಕ್ಕದ್ದು.

11. ಎಲ್ಲಾ ಕಾಮಗಾರಿಗಳ ಪ್ರಗತಿ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ, ಹಣ ಪಾವತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಮಾಡತಕ್ಕದ್ದು.

12. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ರವರು ಪ್ರತಿ ಮಾಹೆ ನಡೆಸುವ ಎಂಪಿಕ್ ಸಭೆಯಲ್ಲಿ ಸದರಿ ಅನುದಾನದ ಆರ್ಥಿಕ ಮತ್ತು ಭೌತಿಕ ಪ್ರಗತಿಯನ್ನು ಪರಿಶೀಲಿಸುವುದು.

13. ತಾಲ್ಲೂಕುವಾರು ಪ್ರಗತಿಯ ವರದಿಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿಯವರಿಂದ ಮುಖ್ಯ ಇಂಜಿನಿಯರ್, ಪಂ.ರಾಜ್ ಇಂಜಿನಿಯರಿಂಗ್ ಇಲಾಖೆ ಇವರಿಗೆ ಮಾಹಿತಿಗಾಗಿ ಸಲ್ಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 45 ವೆಚ್ಚ-6/2021, ದಿ: 12.02.2021 ರ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Signed by Ramesh .d.o
Date: 27-09-2021 15:38:38

(ರಮೇಶ್ ಡಿ.ಓ) 27/9/21
ಉಪ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ
ಹಾಗೂ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಪ್ರತಿಯನ್ನು:

1. ಮಹಾಲೇಖಪಾಲರು (ಲೆಕ್ಕ ಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ , ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.

6. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU) (IF), 5ನೇ ಹಂತ, ಬಹುಮಹಡಿಗಳ ಕಟ್ಟಡಮ ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ನಿರ್ದೇಶಕರು,ಖಜಾನೆ ಇಲಾಖೆ, ಬೆಂಗಳೂರು.
12. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ , ಟ್ರೆಜರಿ ಡಿಪಾರ್ಟ್ ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ , ವಿಧಾನಸೌಧ, ಬೆಂಗಳೂರು.
14. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು
15. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಬೆಂಗಳೂರು
16. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ದಾವಣಗೆರೆ ಜಿಲ್ಲಾ ಪಂಚಾಯತಿ.
17. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು
18. ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ.
19. ರಕ್ಷಾ ಕಡತ/ ಹೆಚ್ಚುವರಿ ಪ್ರತಿ

I/201788/2021

ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:42(11)-5-1: ಆರ್‌ಆರ್‌ಸಿ:21(ಇ-530566)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ, ಬೆಂಗಳೂರು,
ದಿನಾಂಕ: 28.12.2021

ತಿದ್ದುಪಡಿ ಆದೇಶ

ವಿಷಯ: 2021-22 ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ದಾವಣಗೆರೆ ಜಿಲ್ಲೆಯ ಹರಿಹರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಂಜೂರಾತಿ ನೀಡಿದ ರಸ್ತೆ ಕಾಮಗಾರಿಗಳ ಅನುಷ್ಠಾನ ಸಂಸ್ಥೆಯನ್ನು ಬದಲಾವಣೆ ಮಾಡುವ ಕುರಿತು.

ಉಲ್ಲೇಖ: ಸರ್ಕಾರದ ಆದೇಶ ಸಂ: ಗ್ರಾಅಪ:42(11)-5: ಆರ್‌ಆರ್‌ಸಿ: 2021 (ಇ-530544), ದಿನಾಂಕ: 27.09.2021

****

ಮೇಲಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಆದೇಶದಲ್ಲಿ2021-22 ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ದಾವಣಗೆರೆ ಜಿಲ್ಲೆಯ ಹರಿಹರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ರೂ. 4.80 ಕೋಟಿಗಳ ಮೊತ್ತದಲ್ಲಿ 13 ರಸ್ತೆ ಕಾಮಗಾರಿಗಳನ್ನು ಅಭಿವೃದ್ಧಿ ಪಡಿಸಲು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಿಂದ ಅನುಷ್ಠಾನ ಮಾಡುವಂತೆ ಮಂಜೂರಾತಿ ನೀಡಲಾಗಿರುತ್ತದೆ.

ಸದರಿ ಮಂಜೂರಾತಿ ನೀಡಲಾಗಿದ್ದ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಬದಲಾಗಿ ಕೆಆರ್‌ಐಡಿಎಲ್ ಸಂಸ್ಥೆಯಿಂದ ಅನುಷ್ಠಾನ ಮಾಡುವಂತೆ ಕೋರಲಾಗಿದೆ.

ಆದ್ದರಿಂದ ದಾವಣಗೆರೆ ಜಿಲ್ಲೆಯ ಹರಿಹರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರೂ. 4.80 ಕೋಟಿಗಳ ಮೊತ್ತದ 13 ರಸ್ತೆ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಬದಲಾಗಿ ಕೆಆರ್‌ಐಡಿಎಲ್ ಸಂಸ್ಥೆಯಿಂದ ಅನುಷ್ಠಾನ ಮಾಡಲು ಸರ್ಕಾರವು ಅನುಮೋದಿಸಿದೆ ಹಾಗೂ ಉಳಿದಂತೆ ಆದೇಶದಲ್ಲಿ ಯಾವುದೇ ಬದಲಾವಣೆಯಿರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Signed by Ramesh .d.o
Date: 28-12-2021 16:48:12

(ರಮೇಶ್ ಡಿ.ಓ)
ಉಪ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ
ಹಾಗೂ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಪ್ರತಿಯನ್ನು:

1. ಮಹಾಲೇಖಪಾಲರು (ಲೆಕ್ಕ ಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ , ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU) (IF), 5ನೇ ಹಂತ, ಬಹುಮಹಡಿಗಳ ಕಟ್ಟಡಮ ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.

9. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ನಿರ್ದೇಶಕರು,ಖಜಾನೆ ಇಲಾಖೆ, ಬೆಂಗಳೂರು.
12. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ , ಟ್ರೆಜರಿ ಡಿಪಾರ್ಟ್ ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ , ವಿಧಾನಸೌಧ, ಬೆಂಗಳೂರು.
14. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು
15. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಬೆಂಗಳೂರು
16. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ದಾವಣಗೆರೆ ಜಿಲ್ಲಾ ಪಂಚಾಯತಿ.
17. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು
18. ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ.
19. ರಕ್ಷಾ ಕಡತ/ ಹೆಚ್ಚುವರಿ ಪ್ರತಿ

1/226134/2022

ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ: 42(11)-5-2:
ಆರ್‌ಆರ್‌ಸಿ:2021 (ಇ-530566)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ, ಬೆಂಗಳೂರು,
ದಿನಾಂಕ: 24.02.2022

ತಿದ್ದುಪಡಿ ಆದೇಶ

ವಿಷಯ: 2021-22ನೇ ಸಾಲಿಗೆ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮಗಳಡಿ ದಾವಣಗೆರೆ ಜಿಲ್ಲೆಯ ಹರಿಹರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕಾಮಗಾರಿಯನ್ನು ಬದಲಾವಣೆ ಮಾಡುವ ಕುರಿತು.

ಉಲ್ಲೇಖ: 1. ಸರ್ಕಾರದ ಆದೇಶ ಸಂ: ಗ್ರಾಅಪ 42 (11) -5 ಮತ್ತು 42 (11)-5-1 ಆರ್‌ಆರ್‌ಸಿ 2021, ದಿನಾಂಕ: 27.09.2021 ಮತ್ತು 28.12.2021

****

ಒದಲಾದ-1 ರಲ್ಲಿನ ರ ಆದೇಶಗಳಲ್ಲಿ 2021-22ನೇ ಸಾಲಿಗೆ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ಲೆ.ಶೀ. 5054 ರಡಿ ದಾವಣಗೆರೆ ಜಿಲ್ಲೆಯ ಹರಿಹರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ 13 ರಸ್ತೆ ಕಾಮಗಾರಿಗಳನು ರೂ. 4.80 ಕೋಟಿಗಳ ಮೊತ್ತದಲ್ಲಿ ಕೆಆರ್‌ಐಡಿಎಲ್ ಸಂಸ್ಥೆಯಿಂದ ಅನುಷ್ಠಾನ ಮಾಡಲು ಆದೇಶ ಹೊರಡಿಸಲಾಗಿರುತ್ತದೆ.

ಒದಲಾದ -2 ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ದಾವಣಗೆರೆರವರು ಆದೇಶ ಹೊರಡಿಸಲಾಗಿದ್ದ 13 ರಸ್ತೆ ಕಾಮಗಾರಿಗಳ ಪೈಕಿ 1 ಕಾಮಗಾರಿಯನ್ನು ಕೆಳಕಂಡಂತೆ ಬದಲಾವಣೆ ಮಾಡಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಕ್ರ.ಸಂ.	ಅನುಮೋದಿತ ಕಾಮಗಾರಿಯ ಹೆಸರು	ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)	ಪ್ರಸ್ತಾಪಿತ ಬದಲಿ ಕಾಮಗಾರಿಗಳ ಹೆಸರು	ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)
2	ಹರಿಹರ ತಾ|| ನಾಗೇನಹಳ್ಳಿ- ಹರಗನಹಳ್ಳಿ ರಸ್ತೆ 4.10ಕಿಮೀನಲ್ಲಿ ಸೇತುವೆ ನಿರ್ಮಾಣ ರಸ್ತೆ ಅಭಿವೃದ್ಧಿ	80.00	ಹರಿಹರ ತಾಲ್ಲೂಕು ನಿಟ್ಟುರು - ನಂದಿತಾವರೆ ರಸ್ತೆ ಅಭಿವೃದ್ಧಿ	60.00
			ಕೊಪ್ಪ ಗ್ರಾಮದ ಹೊಳೆಹೊನ್ನೂರು ರಸ್ತೆಯಿಂದ ಬೀಸಿಕಲ್ಲು ಕಣಿವೆ ಗುಡ್ಡದವರೆಗೆ ರಸ್ತೆ ಅಭಿವೃದ್ಧಿ	20.00
ಒಟ್ಟು		**80.00**	ಒಟ್ಟು	**80.00**

ಮೇಲ್ಕಂಡಂತೆ ರಸ್ತೆ ಕಾಮಗಾರಿಯನು ಕೆಳಕಂಡ ಷರತ್ತಿಗೊಳಪಟ್ಟು ಬದಲಾವಣೆ ಮಾಡಲು ಸರ್ಕಾರವು ಅನುಮೋದಿಸಿದ್ದು, ಉಳಿದಂತೆ ಈ ಹಿಂದಿನ ಆದೇಶದಲ್ಲಿ ಯಾವುದೇ

ಬದಲಾವಣೆಯಿರುವುದಿಲ್ಲ.

ಷರತ್ತುಗಳು:

1. ಒದಲಾದ-1 ರ ಆದೇಶದಲ್ಲಿ ಈಗಾಗಲೇ ಮಂಜೂರಾತಿ ನೀಡಿದ ರಸ್ತೆ ಕಾಮಗಾರಿಗಳು ಆರಂಭಗೊಳ್ಳದಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು, ಒಂದೊಮ್ಮೆ ಕಾಮಗಾರಿಗಳು ಆರಂಭಿಸತಕ್ಕದ್ದಲ್ಲ.
2. ಹೊಸದಾಗಿ ಬದಲಾವಣೆಯ ಮಂಜೂರಾತಿಗೆ ಕೋರಿರುವ ರಸ್ತೆ ಕಾಮಗಾರಿಯು ಡಿಆರ್‌ಆರ್‌ಪಿ ಪಟ್ಟಿಯಲ್ಲಿರತಕ್ಕದ್ದು.
3. ಈ ಕಾಮಗಾರಿಗಳು ಇನ್ಯಾವುದೇ ಯೋಜನೆಯಲ್ಲಿ ಅಭಿವೃದ್ಧಿ ತೆಗೆದುಕೊಂಡಿರಬಾರದು ಮತ್ತು ಪುನರಾವರ್ತನೆಯಾಗಿರತಕ್ಕದ್ದಲ್ಲ. ಕಾಮಗಾರಿಗಳ ಪುನರಾವರ್ತನೆಯಲ್ಲಿ ವ್ಯತ್ಯಾಸವಿದ್ದತರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೇ ಜವಾಬ್ದಾರಿಯಾಗುತ್ತಾರೆ.
4. ಮತ್ತೆ ಮತ್ತೆ ಬದಲಾವಣೆಗೆ ಪ್ರಸ್ತಾವನೆಯನ್ನು ಸಲ್ಲಿಸತಕ್ಕದ್ದಲ್ಲ ಎಂಬ ಷರತ್ತುಗಳನ್ನು ವಿಧಿಸಿ ಅನುಮೋದಿಸಬಹುದಾಗಿದೆ

Signed by Ramesh .d.o
Date: 24-02-2022 17:48:14

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಮೇಶ್ ಡಿ.ಓ)
ಉಪ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ
ಹಾಗೂ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಪ್ರತಿಯನ್ನು:

1. ಮಹಾಲೇಖಪಾಲರು (ಲೆಕ್ಕ ಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ , ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU) (IF), 5ನೇ ಹಂತ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ನಿರ್ದೇಶಕರು,ಖಜಾನೆ ಇಲಾಖೆ, ಬೆಂಗಳೂರು.
12. ಉಪ ನಿರ್ದೇಶಕರು. ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರೆಜರಿ ಡಿಪಾರ್ಟ್ ಮೆಂಟ್,

ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.

13. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ , ವಿಧಾನಸೌಧ, ಬೆಂಗಳೂರು.
14. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು
15. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಬೆಂಗಳೂರು
16. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ದಾವಣಗೆರೆ ಜಿಲ್ಲಾ ಪಂಚಾಯತಿ.
17. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು
18. ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ.
19. ರಕ್ಷಾ ಕಡತ/ ಹೆಚ್ಚುವರಿ ಪ್ರತಿ

ಕರ್ನಾಟಕ ವಿಧಾನ ಸಭೆ
ಚುಕ್ಕೆ ಗುರುತಿಲ್ಲದ ಪ್ರಶ್ನೆ

ವಿಧಾನ ಸಭೆಯ ಸದಸ್ಯರ ಹೆಸರು : ಶ್ರೀ ರಾಮಪ್ಪ ಎಸ್. (ಹರಿಹರ)

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 464

ಉತ್ತರಿಸಬೇಕಾದ ದಿನಾಂಕ : 23.02.2022

ಉತ್ತರಿಸುವ ಸಚಿವರು : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಇಲಾಖೆಯ ಮಾಹಿತಿ</th></tr>
<tr><td>ಅ</td><td>ಹರಿಹರ ತಾಲ್ಲೂಕಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ 2018-19ನೇ ಸಾಲಿನಿಂದ ಇಲ್ಲಿಯವರೆಗೂ ಕೈಗೊಂಡಿರುವ ಕಾಮಗಾರಿಗಳು ಯಾವುವು; ಸದರಿ ಕಾಮಗಾರಿಗಳಿಗೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ; (ವರ್ಷವಾರು, ಅನುದಾನವಾರು, ಲೆಕ್ಕಶೀರ್ಷಿಕೆವಾರು ಸಂಪೂರ್ಣ ವಿವರ ನೀಡುವುದು)</td><td rowspan="2">ಹರಿಹರ ತಾಲ್ಲೂಕಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ 2018-19ನೇ ಸಾಲಿನಿಂದ ಇಲ್ಲಿಯವರೆಗೂ ಕೈಗೊಂಡಿರುವ ಕಾಮಗಾರಿಗಳು ಹಾಗೂ ಸದರಿ ಕಾಮಗಾರಿಗಳಿಗೆ ಮಂಜೂರು ಮಾಡಲಾದ ಅನುದಾನದ ವಿವರವನ್ನು ಅನುಬಂಧ-1 ರಿಂದ 4 ರಲ್ಲಿ ಒದಗಿಸಿದೆ.</td></tr>
<tr><td>ಆ</td><td>ಸದರಿ ಮಂಜೂರಾದ ಕಾಮಗಾರಿಗಳು ಯಾವ ಯಾವ ಹಂತದಲ್ಲಿವೆ? (ಸಂಪೂರ್ಣ ವಿವರ ನೀಡುವುದು)</td></tr>
</table>

ಸಂಖ್ಯೆ: ಗ್ರಾಅಪ/27/ಯೋಉಮಾ/2022

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಧಾನ ಸಭೆ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:464

ಅನುಬಂಧ-1

2018-19 ನೇ ಸಾಲಿನಲ್ಲಿ ದಾವಣಗೆರೆ ಜಿಲ್ಲೆಯ ಹರಿಹರ ತಾಲ್ಲೂಕಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುಷ್ಠಾನಿಸಲಾದ ಪ್ರಮುಖ ಯೋಜನೆಗಳಡಿ ಕೈಗೊಂಡ ಕಾಮಗಾರಿಗಳಿಗೆ ಮಂಜೂರು ಮಾಡಲಾದ ಅನುದಾನದ ವಿವರ.

ರೂ.ಲಕ್ಷಗಳಲ್ಲಿ

ಕ್ರ. ಸಂ	ಯೋಜನೆ	ಕಾಮಗಾರಿಗಳ ಸ್ವರೂಪ	ಮಂಜೂರು ಮಾಡಲಾದ ಅನುದಾನ (ರೂ.ಲಕ್ಷಗಳಲ್ಲಿ)	ಕೈಗೊಂಡ ಕಾಮಗಾರಿಗಳ ಸಂಖ್ಯೆ	ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ	ಅಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ	ಪ್ರಾರಂಭಿಸದ ಕಾಮಗಾರಿಗಳ ಸಂಖ್ಯೆ	ಷರಾ
1	2	3	4	5	6	7	8	9
1	ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ	ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣ ಹಾಗೂ ಅಭಿವೃದ್ಧಿ ಕಾಮಗಾರಿಗಳು, ಗ್ರಾಮೀಣ ಮೂಲಭೂತ ಸೌಕರ್ಯಗಳ ಕಾಮಗಾರಿಗಳು, ಕೃಷಿ ಹಾಗೂ ತೋಟಗಾರಿಕೆ ಕಾಮಗಾರಿಗಳು, ಸಮುದಾಯ ಮತ್ತು ವೈಯಕ್ತಿಕ ಕಾಮಗಾರಿಗಳು ಇತ್ಯಾದಿ.	1528.79	1146	1097	49	-	
2	ಸ್ವಚ್ಛ ಭಾರತ ಅಭಿಯಾನ	ವೈಯಕ್ತಿಕ ಶೌಚಾಲಯ	6.35	47	47	-	-	
3	ಗ್ರಾಮೀಣ ನೀರು ಸರಬರಾಜು (ಎನ್.ಆರ್.ಡಿ.ಡಬ್ಲ್ಯೂ.ಪಿ)	Scheme Name :MWSR, PWSS, Pipeline,Augumenation, BW, WPP MVS & MVS O& M)	4557.00	226	214	10	2	
4	ಸಿ.ಎಂ.ಜಿ.ಎಸ್.ವೈ	ರಸ್ತೆ ದುರಸ್ಥಿ/ಅಭಿವೃದ್ಧಿ	67.52	20	20	-	-	-
5	ರಸ್ತೆಗಳು -ಟಾಸ್ಕ್ ಫೋರ್ಸ್	ರಸ್ತೆ ದುರಸ್ಥಿ/ಡಾಂಬರೀಕರಣ/ ಅಭಿವೃದ್ಧಿ	28.78	7	7	-	-	-
6	ಪಿ.ಎಂ.ಜಿ.ಎಸ್.ವೈ. ರಸ್ತೆಗಳ ನಿರ್ವಹಣೆ	ರಸ್ತೆ ಅಭಿವೃದ್ಧಿ ಕಾಮಗಾರಿ	12.96	3	3	-	-	4ನೇ ವರ್ಷದ ನಿರ್ವಹಣೆ
7	ಆರ್.ಐ.ಡಿ.ಎಫ್ ನಬಾರ್ಡ್	ರಸ್ತೆ ಅಭಿವೃದ್ಧಿ	100.00	2	2	-	-	-
8	ಸುವರ್ಣ ಗ್ರಾಮೋದಯ/ ಗ್ರಾಮ ವಿಕಾಸ/ ಮುಖ್ಯ ಮಂತ್ರಿ ಗ್ರಾಮ ವಿಕಾಸ	ರಸ್ತೆ ಮತ್ತು ಕಟ್ಟಡ ಕಾಮಗಾರಿಗಳು	593.30	9	2	7	0	2019-20 ಮತ್ತು 2020-21 ರಲ್ಲಿ ಮುಂದುವರೆದ ಕಾಮಗಾರಿಗಳು
9	ರಾಷ್ಟ್ರೀಯ ಜೈವಾನೀಲ ಅಭಿವೃದ್ಧಿ ಯೋಜನೆ	ಸಹಾಯಧನದ ಮೇರೆಗೆ ಫಲಾನುಭವಿಗಳಿಗೆ ಜೀವಾನಿಲ ಸ್ಥಾವರಗಳನ್ನು ನಿರ್ಮಿಸಿಕೊಡಲಾಗಿದೆ.	0.59	3	3	-	-	
10	ಜಿಲ್ಲಾ ಪಂಚಾಯಿತಿ ಅಭಿವೃದ್ಧಿ ಅನುದಾನ	ಕಟ್ಟಡ ದುರಸ್ಥಿ/ಅಭಿವೃದ್ಧಿ/ ಕೆರೆ ಅಭಿವೃದ್ಧಿ/ ಬಾಕ್ಸ್ ಚರಂಡಿ ನಿರ್ಮಾಣ/ ಹೈಮಾಸ್ಟ ದೀಪ ಅಳವಡಿಕೆ	107.68	65	65	-	-	ಶಾಸನಬದ್ಧ & ಲಿಂಕ್‌ಡಾಮಕ್ಯುಮೆಂಟ್ ಒಳಗೊಂಡಂತೆ
11	ಗ್ರಾಮ ಪಂಚಾಯಿತಿ ಅಭಿವೃದ್ಧಿ ಅನುದಾನ (ಶಾಸನಬದ್ಧ ಅನುದಾನ)	-	120.00	-	-	-	-	ಸರ್ಕಾರದಿಂದ ನೇರವಾಗಿ ಗ್ರಾ.ಪಂ. ಬಿಡುಗಡೆಯಾಗುತ್ತಿದೆ
12	ತಾಲ್ಲೂಕು ಪಂಚಾಯಿತಿ ಅಭಿವೃದ್ಧಿ ಅನುದಾನ	ರಸ್ತೆ ಮತ್ತು ಕಟ್ಟಡ ಕಾಮಗಾರಿಗಳು	100.00	60	60	-	-	
13	ಗ್ರಾಅಪಂ.ರಾಜ್ ಇಲಾಖೆಯ ಇತರೆ ಯೋಜನೆಗಳು	ರಸ್ತೆ ಸುರಕ್ಷತೆ	9.00	2	2	-	-	

ವಿಧಾನ ಸಭೆ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:464

ಅನುಬಂಧ-2

2019-20 ನೇ ಸಾಲಿನಲ್ಲಿ ದಾವಣಗೆರೆ ಜಿಲ್ಲೆಯ ಹರಿಹರ ತಾಲ್ಲೂಕಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುಷ್ಠಾನಿಸಲಾದ ಪ್ರಮುಖ ಯೋಜನೆಗಳಡಿ ಕೈಗೊಂಡ ಕಾಮಗಾರಿಗಳಿಗೆ ಮಂಜೂರು ಮಾಡಲಾದ ಅನುದಾನದ ವಿವರ.

ರೂ.ಲಕ್ಷಗಳಲ್ಲಿ

ಕ್ರ.ಸಂ	ಯೋಜನೆ	ಕಾಮಗಾರಿಗಳ ಸ್ವರೂಪ	ಮಂಜೂರು ಮಾಡಲಾದ ಅನುದಾನ (ರೂ.ಲಕ್ಷಗಳಲ್ಲಿ)	ಕೈಗೊಂಡ ಕಾಮಗಾರಿಗಳ ಸಂಖ್ಯೆ	ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ	ಅಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ	ಪ್ರಾರಂಭಿಸದ ಕಾಮಗಾರಿಗಳ ಸಂಖ್ಯೆ	ಷರಾ
1	2	3	4	5	6	7	8	9
1	ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ	ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣ ಹಾಗೂ ಅಭಿವೃದ್ಧಿ ಕಾಮಗಾರಿಗಳು, ಗ್ರಾಮೀಣ ಮೂಲಭೂತ ಸೌಕರ್ಯಗಳ ಕಾಮಗಾರಿಗಳು, ಕೃಷಿ ಹಾಗೂ ತೋಟಗಾರಿಕೆ ಕಾಮಗಾರಿಗಳು, ಸಮುದಾಯ ಮತ್ತು ವೈಯಕ್ತಿಕ ಕಾಮಗಾರಿಗಳು ಇತ್ಯಾದಿ.	807.04	658	469	189	0	
2	ಸ್ವಚ್ಛ ಭಾರತ ಅಭಿಯಾನ	ವೈಯಕ್ತಿಕ ಶೌಚಾಲಯ	165.25	236	236	-	-	
3	ಗ್ರಾಮೀಣ ನೀರು ಸರಬರಾಜು (ಎನ್.ಆರ್.ಡಿ.ಡಬ್ಲ್ಯೂ.ಪಿ)	Scheme Name :MWSR, PWSS, Pipeline,Augumenation, BW, WPP MVS & MVS O& M)	6583.45	254	192	61	1	
4	ಸಿ.ಎಂ.ಜಿ.ಎಸ್.ವೈ	ರಸ್ತೆ ನಿರ್ಮಾಣ/ಅಭಿವೃದ್ಧಿ	65.25	18	18	-	-	
5	ರಸ್ತೆಗಳು -ಟಾಸ್ಕ್ ಫೋರ್ಸ್	ರಸ್ತೆ ನಿರ್ಮಾಣ/ಅಭಿವೃದ್ಧಿ	30.80	12	11	-	-	1 ಕಾಮಗಾರಿ ಸಾರ್ವಜನಿಕರ ತಕರಾರಿನಿಂದ ಕೈಬಿಡಲಾಗಿದೆ
6	ಪಿ.ಎಂ.ಜಿ.ಎಸ್.ವೈ. ರಸ್ತೆಗಳ ನಿರ್ವಹಣೆ	ರಸ್ತೆ ಅಭಿವೃದ್ಧಿ ಕಾಮಗಾರಿ	2047.62	-	-	-	2	ಟೆಂಡರ್ ಪ್ರಕ್ರಿಯೆಲ್ಲಿರುತ್ತವೆ
7	ರಾಷ್ಟ್ರೀಯ ಜೈವಾನೀಲ ಅಭಿವೃದ್ಧಿ ಯೋಜನೆ	ಸಹಾಯಧನದ ಮೇರೆಗೆ ಫಲಾನುಭವಿಗಳಿಗೆ ಜೀವಾನಿಲ ಸ್ಥಾವರಗಳನ್ನು ನಿರ್ಮಿಸಿಕೊಡಲಾಗಿದೆ.	0.39	2	2	-	-	-
8	ಜಿಲ್ಲಾ ಪಂಚಾಯಿತಿ ಅಭಿವೃದ್ಧಿ ಅನುದಾನ	ಕಟ್ಟಡ ದುರಸ್ಥಿ/ಸುಣ್ಣಬಣ್ಣ/ ಕೆರೆ ಅಭಿವೃದ್ಧಿ/ ರಸ್ತೆ ನಿರ್ಮಾಣ/ಚರಂಡಿ ನಿರ್ಮಾಣ/ ಹೈಮಾಸ್ಟ ಲೈಟ್ ಅಳವಡಿಕೆ ಇತರೆ	110.03	60	60	-	-	ಶಾಸನಬದ್ಧ & ಲಿಂಕ್‌ಡಾಮಕ್ಯುಮೆಂಟ್ ಒಳಗೊಂಡಂತೆ
9	ಗ್ರಾಮ ಪಂಚಾಯಿತಿ ಅಭಿವೃದ್ಧಿ ಅನುದಾನ (ಶಾಸನಬದ್ಧ ಅನುದಾನ)	-	120.00	-	-	-	-	ಸರ್ಕಾರದಿಂದ ನೇರವಾಗಿ ಗ್ರಾ.ಪಂ. ಬಿಡುಗಡೆಯಾಗುತ್ತಿದೆ
10	ತಾಲ್ಲೂಕು ಪಂಚಾಯಿತಿ ಅಭಿವೃದ್ಧಿ ಅನುದಾನ	ರಸ್ತೆ ಮತ್ತು ಕಟ್ಟಡ ಕಾಮಗಾರಿಗಳು	200.00	102	96	6	-	
11	ಗ್ರಾ.ಅ.ಪಂ.ರಾಜ್ ಇಲಾಖೆಯ ಇತರೆ ಯೋಜನೆಗಳು	ರಸ್ತೆ ಸುರಕ್ಷತೆ	10.00	1	1	-	-	-

2

ವಿಧಾನ ಸಭೆ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:464

ಅನುಬಂಧ-3

2020-21 ನೇ ಸಾಲಿನಲ್ಲಿ ದಾವಣಗೆರೆ ಜಿಲ್ಲೆಯ ಹರಿಹರ ತಾಲ್ಲೂಕಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುಷ್ಠಾನಿಸಲಾದ ಪ್ರಮುಖ ಯೋಜನೆಗಳಡಿ ಕೈಗೊಂಡ ಕಾಮಗಾರಿಗಳಿಗೆ ಮಂಜೂರು ಮಾಡಲಾದ ಅನುದಾನದ ವಿವರ.

ಕ್ರ.ಸಂ	ಯೋಜನೆ	ಕಾಮಗಾರಿಗಳ ಸ್ವರೂಪ	ಮಂಜೂರು ಮಾಡಲಾದ ಅನುದಾನ (ರೂ.ಲಕ್ಷಗಳಲ್ಲಿ)	ಕೈಗೊಂಡ ಕಾಮಗಾರಿಗಳ ಸಂಖ್ಯೆ	ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ	ಅಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ	ಪ್ರಾರಂಭಿಸದ ಕಾಮಗಾರಿಗಳ ಸಂಖ್ಯೆ	ಷರಾ
1	2	3	4	5	6	7	8	9
1	ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ	ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣ ಹಾಗೂ ಅಭಿವೃದ್ಧಿ ಕಾಮಗಾರಿಗಳು, ಗ್ರಾಮೀಣ ಮೂಲಭೂತ ಸೌಕರ್ಯಗಳ ಕಾಮಗಾರಿಗಳು, ಕೃಷಿ ಹಾಗೂ ತೋಟಗಾರಿಕೆ ಕಾಮಗಾರಿಗಳು, ಸಮುದಾಯ ಮತ್ತು ವೈಯಕ್ತಿಕ ಕಾಮಗಾರಿಗಳು ಇತ್ಯಾದಿ.	642.52	879	517	362	-	
2	ಸ್ವಚ್ಛ ಭಾರತ ಅಭಿಯಾನ	ವೈಯಕ್ತಿಕ ಶೌಚಾಲಯ	144.81	1140	1140	-	-	
3	ಗ್ರಾಮೀಣ ನೀರು ಸರಬರಾಜು (ಎನ್.ಆರ್.ಡಿ.ಡಬ್ಲ್ಯೂ.ಪಿ) /ಜೆ.ಜೆ.ಎಂ	Scheme Name :MWSR, PWSS, Pipeline,Augumenation, BW, WPP MVS & MVS O& M)	11247.20	212	135	60	17	
4	ಸಿ.ಎಂ.ಜಿ.ಎಸ್.ವೈ	ರಸ್ತೆ ನಿರ್ವಹಣೆ	22.17	12	12	-	-	-
5	ಪಿ.ಎಂ.ಜಿ.ಎಸ್.ವೈ	ರಸ್ತೆ ಅಭಿವೃದ್ಧಿ ಕಾಮಗಾರಿ	-	2	-	2	-	ಕಳೆದ ವರ್ಷ ಅನುಮೋದನೆಯಾದ 02 ಕಾಮಗಾರಿಗಳು 2020-21 ನೇ ಸಾಲಿಗೆ ಮುಂದುವರೆದಿದೆ.
6	ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆ	ಸಹಾಯಧನದ ಮೇರೆಗೆ ಫಲಾನುಭವಿಗಳಿಗೆ ಜೀವಾನಿಲ ಸ್ಥಾವರಗಳನ್ನು ನಿರ್ಮಿಸಿಕೊಡಲಾಗಿದೆ.	0.20	1	1	-	-	-
7	ಹಣಕಾಸು ಆಯೋಗದ ಅನುದಾನ	ಅಂತರ್ಜಲ ಅಭಿವೃದ್ಧಿ/ಸಿಸಿ ಚರಂಡಿ/ ಕಟ್ಟಡ ದುರಸ್ತಿ/ ಹೈಮಾಸ್ಟ ದೀಪ ಅಳವಡಿಕೆ	60.00	21	21	-	-	-
8	ಜಿಲ್ಲಾ ಪಂಚಾಯಿತಿ ಅಭಿವೃದ್ಧಿ ಅನುದಾನ	ಚರಂಡಿ ನಿರ್ಮಾಣ/ ಕಟ್ಟಡ ದುರಸ್ತಿ/ ಹೈಮಾಸ್ಟ ದೀಪ ಅಳವಡಿಕೆ/ ಕೆರೆ ಅಭಿವೃದ್ಧಿ	81.54	51	51	-	-	-
9	ಗ್ರಾಮ ಪಂಚಾಯಿತಿ ಅಭಿವೃದ್ಧಿ ಅನುದಾನ (ಶಾಸನಬದ್ಧ ಅನುದಾನ)	-	120.00	-	-	-	-	ಸರ್ಕಾರದಿಂದ ನೇರವಾಗಿ ಗ್ರಾ.ಪಂ.ಗಳಿಗೆ ಬಿಡುಗಡೆಯಾಗುತ್ತಿದೆ
10	ತಾಲ್ಲೂಕು ಪಂಚಾಯಿತಿ ಅಭಿವೃದ್ಧಿ ಅನುದಾನ	ರಸ್ತೆ ಮತ್ತು ಕಟ್ಟಡ ಕಾಮಗಾರಿಗಳು	182.25	89	-	-	-	
11	ಗ್ರಾಅಪಂ.ರಾಜ್ ಇಲಾಖೆಯ ಇತರೆ ಯೋಜನೆಗಳಳು	ರಸ್ತೆ ನಿರ್ಮಾಣ/ ಚರಂಡಿ ನಿರ್ಮಾಣ	177.00	8	8	-	-	-

ವಿಧಾನ ಸಭೆ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:464

ಅನುಬಂಧ-4

2021-22 ನೇ(ಡಿಸೆಂಬರ್ ಅಂತ್ಯಕ್ಕೆ) ಸಾಲಿನಲ್ಲಿ ದಾವಣಗೆರೆ ಜಿಲ್ಲೆಯ ಹರಿಹರ ತಾಲ್ಲೂಕಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುಷ್ಠಾನಿಸಲಾದ ಪ್ರಮುಖ ಯೋಜನೆಗಳಡಿ ಕೈಗೊಂಡ ಕಾಮಗಾರಿಗಳಿಗೆ ಮಂಜೂರು ಮಾಡಲಾದ ಅನುದಾನದ ವಿವರ.

ರೂ.ಲಕ್ಷಗಳಲ್ಲಿ

ಕ್ರ.ಸಂ	ಯೋಜನೆ	ಕಾಮಗಾರಿಗಳ ಸ್ವರೂಪ	ಮಂಜೂರು ಮಾಡಲಾದ ಅನುದಾನ (ರೂ.ಲಕ್ಷಗಳಲ್ಲಿ)	ಕೈಗೊಂಡ ಕಾಮಗಾರಿಗಳ ಸಂಖ್ಯೆ	ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ	ಅಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ	ಪ್ರಾರಂಭಿಸದ ಕಾಮಗಾರಿಗಳ ಸಂಖ್ಯೆ	ಷರಾ
1	2	3	4	5	6	7	8	9
1	ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ	ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣ ಹಾಗೂ ಅಭಿವೃದ್ಧಿ ಕಾಮಗಾರಿಗಳು, ಗ್ರಾಮೀಣ ಮೂಲಭೂತ ಸೌಕರ್ಯಗಳ ಕಾಮಗಾರಿಗಳು, ಕೃಷಿ ಹಾಗೂ ತೋಟಗಾರಿಕೆ ಕಾಮಗಾರಿಗಳು, ಸಮುದಾಯ ಮತ್ತು ವೈಯಕ್ತಿಕ ಕಾಮಗಾರಿಗಳು ಇತ್ಯಾದಿ.	1668.06	1034	74	960	-	
2	ಸ್ವಚ್ಛ ಭಾರತ ಅಭಿಯಾನ	ವೈಯಕ್ತಿಕ ಶೌಚಾಲಯ	48.12	401	299	102	-	
3	ಗ್ರಾಮೀಣ ನೀರು ಸರಬರಾಜು (ಎನ್.ಆರ್.ಡಿ.ಡಬ್ಲ್ಯೂ.ಪಿ) /ಜೆ.ಜೆ.ಎಂ	Scheme Name :MWSR, PWSS, Pipeline, Augumenation, BW, WPP MVS & MVS O& M)	438.23	12	-	-	12	
4	ಸಿ.ಎಂ.ಜಿ.ಎಸ್.ವೈ		45.99	7	7	-	-	-
5	ಪಿ.ಎಂ.ಜಿ.ಎಸ್.ವೈ	ರಸ್ತೆ ಅಭಿವೃದ್ಧಿ ಕಾಮಗಾರಿ	-	-	-	2	-	2019-20 ನೇ ಸಾಲಿನಲ್ಲಿ ಅನುಮೋದನೆಯಾದ 2 ಕಾಮಗಾರಿಗಳು 2021-22 ನೇ ಸಾಲಿಗೆ ಮುಂದುವರೆದ ಕಾಮಗಾರಿಗಳಾಗಿರುತ್ತವೆ.
6	ಸುವರ್ಣ ಗ್ರಾಮೋದಯ/ ಗ್ರಾಮ ವಿಕಾಸ/ ಮುಖ್ಯ ಮಂತ್ರಿ ಗ್ರಾಮ ವಿಕಾಸ	ಸಿಸಿ ರಸ್ತೆ, ಚರಂಡಿ ಮತ್ತು ಡೆಕ್ ಸ್ಲ್ಯಾಬ್, ಸಮುದಾಯ ಭವನ/ಬಯಲು ರಂಗಮಂದಿರ, ಕ್ರೀಡಾ ಚಟುವಟಿಕೆಗಳ ಅಭಿವೃದ್ಧಿಗಾಗಿ ಜಿಮ್/ಗರಡಿ ಮನೆ/ಫ್ಲಡ್ ಲೈಟ್ ಆಟದ ಮೈದಾನ/ದೇಶಿ ಕ್ರೀಡೆ ಅಭಿವೃದ್ಧಿ ಹಾಗೂ ಇತರೆ ಕಾಮಗಾರಿಗಳು	593.30	9	2	7	0	-
7	ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆ	ಸಹಾಯಧನದ ಮೇರೆಗೆ ಫಲಾನುಭವಿಗಳಿಗೆ ಜೀವಾನಿಲ ಸ್ಥಾವರಗಳನ್ನು ನಿರ್ಮಿಸಿಕೊಡಲಾಗಿದೆ.	-	-	-	-	-	-
8	ಹಣಕಾಸು ಆಯೋಗದ ಅನುದಾನ	ಸಿ.ಸಿ. ರಸ್ತೆ ನಿರ್ಮಾಣ/ ಚರಂಡಿ ನಿರ್ಮಾಣ/ ಕಟ್ಟಡ ದುರಸ್ತಿ	33.60	17	17	-	-	-
9	ಜಿಲ್ಲಾ ಪಂಚಾಯಿತಿ ಅಭಿವೃದ್ಧಿ ಅನುದಾನ	ಕಟ್ಟಡ ದುರಸ್ತಿ/ ರಸ್ತೆ ದುರಸ್ತಿ/ ಸಿ. ಸಿ. ಚರಂಡಿ/ ಕಾಂಪೌಂಡ್ ನಿರ್ಮಾಣ	134.93	53	53	-	-	ಶಾಸನಬದ್ಧ & ಲಿಂಕ್‌ಡಾಮಕ್ಯುಮೆಂಟ್ ಒಳಗೊಂಡಂತೆ
10	ಗ್ರಾಮ ಪಂಚಾಯಿತಿ ಅಭಿವೃದ್ಧಿ ಅನುದಾನ (ಶಾಸನಬದ್ಧ ಅನುದಾನ)	ಸಿಬ್ಬಂಧಿ ವೇತನ	11.86	-	-	-	-	
11	ತಾಲ್ಲೂಕು ಪಂಚಾಯಿತಿ ಅಭಿವೃದ್ಧಿ ಅನುದಾನ	-	201.70	90	30	60	-	

4

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	466
ಸದಸ್ಯರ ಹೆಸರು	:	ಶ್ರೀ ಅಮರೇಗೌಡ ಲಿಂಗನಗೌಡ ಪಾಟೀಲ್ ಬಯ್ಯಾಪುರ್ (ಕುಷ್ಟಗಿ)
ಉತ್ತರಿಸುವ ದಿನಾಂಕ	:	23.02.2022
ಉತ್ತರಿಸುವ ಸಚಿವರು	:	ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ)	371ಜೆ ಅಡಿಯಲ್ಲಿ ರಚಿಸಲಾಗಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಪೂರ್ಣ ಪ್ರಮಾಣದ ಆಡಳಿತ ಮಂಡಳಿಯನ್ನು ರಚಿಸಲಾಗಿದೆಯೇ;	ಕಲ್ಯಾಣ (ಹಿಂದಿನ ಹೈದ್ರಾಬಾದ) ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯು ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಆರ್:ಪಿಎಲ್ಎಕ್ಸ್:2012, ದಿನಾಂಕ: 06.11.2013ರನ್ವಯ ರಚನೆಯಾಗಿದ್ದು, 2013 ರಿಂದ ಪ್ರಾರಂಭವಾಗಿದೆ. ಮಂಡಳಿಯ ಆಡಳಿತ ಮಂಡಳಿಗೆ ಒಬ್ಬರು ಅಧ್ಯಕ್ಷರು, ಎಂಟು ಜನ ವಿಧಾನ ಸಭೆಯ ಸದಸ್ಯರು, ಇಬ್ಬರು ವಿಧಾನ ಪರಿಷತ್ ಸದಸ್ಯರು, ಒಬ್ಬರು ಸಂಸತ್ತಿನ ಸದಸ್ಯರು, ಒಬ್ಬರು ಜಿಲ್ಲಾ ಪಂಚಾಯತ ಅಧ್ಯಕ್ಷರು, ಒಬ್ಬರು ಸ್ಥಳೀಯ ಸಂಸ್ಥೆಯ ಅಧ್ಯಕ್ಷ/ಮೇಯರ್ ಮತ್ತು ಐದು ಜನ ತಜ್ಞರನ್ನು ಒಳಗೊಂಡಿರುತ್ತದೆ. ಪ್ರಸ್ತುತ ಮಂಡಳಿಗೆ ಒಬ್ಬರು ಅಧ್ಯಕ್ಷರು, ಎಂಟು ಜನ ವಿಧಾನ ಸಭೆಯ ಸದಸ್ಯರು, ಇಬ್ಬರು ವಿಧಾನ ಪರಿಷತ್ ಸದಸ್ಯರು, ಒಬ್ಬರು ಸಂಸತ್ತಿನ ಸದಸ್ಯರು ಹಾಗೂ ಒಬ್ಬರು ತಜ್ಞರನ್ನು ನೇಮಕ ಮಾಡಲಾಗಿದೆ. ಉಳಿದ ಸದಸ್ಯರುಗಳನ್ನು ನೇಮಕ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇದೆ.
ಆ)	ಪೂರ್ಣ ಪ್ರಮಾಣದಲ್ಲಿ ಆಡಳಿತ ಮಂಡಳಿ ರಚಿಸದೇ ಇರುವುದರಿಂದ ಮಂಡಳಿಯ ಕಾರ್ಯ ಪ್ರಗತಿ ಕುಂಠಿತ ಗೊಂಡಿರುವುದು ಹಾಗೂ ಕಾಮಗಾರಿಗಳ ಅನುಷ್ಠಾನ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಯಾವಾಗ ಮಂಡಳಿಯನ್ನು ರಚಿಸಲಾಗುವುದು;	-ಇಲ್ಲ- 2021-22ನೇ ಸಾಲಿನಲ್ಲಿ ಮಂಡಳಿಗೆ ರೂ.1492.97 ಕೋಟಿಗಳನ್ನು ಆಯವ್ಯಯದಲ್ಲಿ ನಿಗಧಿಪಡಿಸಿದ್ದು, ಈವರೆಗೆ ರೂ. 1492.97 ಕೋಟಿಗಳನ್ನು ಬಿಡುಗಡೆ ಮಾಡಲಾಗಿದ್ದು, ಆರಂಭಿಕ ಶಿಲ್ಕನ್ನು ಒಳಗೊಂಡಂತೆ ರೂ. 861.27 ಕೋಟಿಗಳು ವೆಚ್ಚವಾಗಿರುತ್ತದೆ. ಸದರಿ ಯೋಜನೆಯಡಿ ಒಟ್ಟಾರೆ, 4368 ಕಾಮಗಾರಿಗಳಿಗೆ ಕ್ರಿಯಾ ಯೋಜನೆಯನ್ನು

		ಮಂಜೂರು ಮಾಡಿದ್ದು, **ಜನವರಿ**-2022ರ ಅಂತ್ಯದವರೆಗೆ 4238 ಕಾಮಗಾರಿಗಳು ಪೂರ್ಣಗೊಂಡಿದ್ದು, ಉಳಿದ ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತವೆ. ಕಾಮಗಾರಿಗಳ ಅನುಷ್ಠಾನವನ್ನು ವಿವಿಧ ಏಜೆನ್ಸಿಗಳು, ಜಿಲ್ಲಾಧಿಕಾರಿಗಳ ಹಂತದಲ್ಲಿ ಅನುಷ್ಠಾನ ಮಾಡುವುದರಿಂದ ಕಾಮಗಾರಿಗಳ ಪ್ರಗತಿ ಕುಂಠಿತವಾಗಿರುವುದಿಲ್ಲ. ಪೂರ್ಣ ಪ್ರಮಾಣದಲ್ಲಿ ಆಡಳಿತ ಮಂಡಳಿಯನ್ನು ಶೀಘ್ರದಲ್ಲೇ ರಚಿಸಲಾಗುವುದು.
ಇ)	ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಕೇಂದ್ರ ಸರ್ಕಾರದಿಂದ ವಿವಿಧ ಅನುದಾನವನ್ನು ಕೋರುವ ಪ್ರಸ್ತಾವನೆ ಸರ್ಕಾರಕ್ಕೆ ಇದೆಯೇ; ಹಾಗಿದ್ದಲ್ಲಿ, ಈ ಕುರಿತು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ; (ಸಂಪೂರ್ಣ ವಿವರಗಳನ್ನು ನೀಡುವುದು)	-ಹೌದು- 2022-23ನೇ ಸಾಲಿನ ಆಯವ್ಯಯದಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಅಡಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗಾಗಿ ರೂ. 5080.00 ಕೋಟಿಗಳ ಸಹಾಯಾನುದಾನವನ್ನು ಒದಗಿಸಲು ಮಾನ್ಯ ಮುಖ್ಯಮಂತ್ರಿಗಳಿಂದ ಕೇಂದ್ರ ಸರ್ಕಾರದ ಮಾನ್ಯ ಗೃಹ ಸಚಿವರಿಗೆ ಹಾಗೂ ಮಾನ್ಯ ಹಣಕಾಸು ಸಚಿವರಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ವಿವರ ಅನುಬಂಧ-1ರಲ್ಲಿ ನೀಡಲಾಗಿದೆ.
ಈ)	ಸಚಿವ ಸಂಪುಟದ ನಿರ್ಣಯದಂತೆ ಮಂಡಳಿಗೆ ಗರಿಷ್ಠ ಪ್ರಮಾಣದ ಅನುದಾನವನ್ನು ಯಾವಾಗ ಒದಗಿಸಲಾಗುವುದು?	ಮಂಡಳಿಗೆ ಗರಿಷ್ಠ ಪ್ರಮಾಣದ ಅನುದಾನವನ್ನು ಒದಗಿಸುವ ಬಗ್ಗೆ ಸಚಿವ ಸಂಪುಟದ ನಿರ್ಣಯವಾಗಿರುವುದಿಲ್ಲ. 2021-22ನೇ ಸಾಲಿನ ಆಯವ್ಯಯದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ರೂ.1492.97 ಕೋಟಿಗಳ ಅನುದಾನವನ್ನು ಒದಗಿಸಿದ್ದು, ಪೂರ್ಣ ಪ್ರಮಾಣದ ಅನುದಾನವನ್ನು ಮಂಡಳಿಗೆ ಬಿಡುಗಡೆ ಮಾಡಲಾಗಿದೆ.

ಸಂಖ್ಯೆ: ಪಿಡಿಎಸ್ 42 ಹೆಚ್ ಕೆಡಿ 2022

(ಮುನಿರತ್ನ)
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ ಸಚಿವರು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 466 ರ ಅನುಬಂಧ- 1

BASAVARAJ BOMMAI
CHIEF MINISTER

GOVERNMENT OF KARNATAKA

VIDHANA SOUDHA
BENGALURU - 560 001

No. CM/26/GOI/2022

Date : 04-02-2022

Respected Sir,

With reference to the discussions during the South Zone Council meeting at Tirupathi on 14.11.2021. I wish to seek special central assistance for upliftment of most backward region of Karnataka. As Government of Andhra Pradesh has sought special funds for development of backward regions of their state, in the same vein, Karnataka has been seeking additional central assistance under Article 371J for uplifting erstwhile Hyderabad Karnataka Region. (Letter dated 15.02.2021 - copy enclosed)

While the amendment to the Constitution vide Article 371J has given some reservations in jobs & educational Institutions, there is a need to support the growth of this region under various Central Sector schemes. After the Constitutional Amendment, the State Government has allocated Rs. 8878.33 Crores to Kalyan Karnataka Regional Development Board since 2013. However, this region has the legacy of very poor Human Development Indicators. In fact, two of the districts in Raichur and Yadgir which are part of Kalyan Karnataka, continue to be in the list of worst performers under the Aspirational Districts Development Programme of Hon'ble Prime Minister.

This region has been also ranked as the poorest under Multi Dimension Poverty Index (2020-21) of NITI Aayog. As per this 9.09 lakhs households of 36.38 lakh population are under MPI in Kalyan Karnataka region.

Hence, a proposal for grant of Rs. 5080 crores under different Central Sector Schemes has been enclosed for kind perusal. I earnestly request you to consider the same favourably in the forthcoming budget. This will go a long way in realising the dreams of Late Sri Sardar Vallabhbai Patel who brought Independence to this region from the exploitative clutches of erstwhile Nizam of Hyderabad.

With warm regards,

Yours sincerely,

(BASAVARAJ BOMMAI)

Shri Amit Shah
Hon'ble Union Minister for Home Affairs
North Block, Central Secretariat
New Delhi-110 001.

[illegible]

BASAVARAJ BOMMAI
CHIEF MINISTER

GOVERNMENT OF KARNATAKA

VIDHANA SOUDHA
BENGALURU - 560 001

No. CM/27/GOI/2022

Date 04-02-2022

Dear Smt. Nirmala Sitharaman ji,

With reference to the discussions during the South Zone Council meeting at Tirupathi on 14.11.2021. I wish to seek special central assistance for upliftment of most backward region of Karnataka. As Government of Andhra Pradesh has sought special funds for development of backward regions of their state, in the same vein, Karnataka has been seeking additional central assistance under Article 371J for uplifting erstwhile Hyderabad Karnataka Region. (Letter dated 15.02.2021 - copy enclosed)

While the amendment to the Constitution vide Article 371J has given some reservations in jobs & educational Institutions, there is a need to support the growth of this region under various Central Sector schemes. After the Constitutional Amendment, the State Government has allocated Rs. 8878.33 Crores to Kalyan Karnataka Regional Development Board since 2013. However, this region has the legacy of very poor Human Development Indicators. In fact, two of the districts in Raichur and Yadgir which are part of Kalyan Karnataka, continue to be in the list of worst performers under the Aspirational Districts Development Programme of Hon'ble Prime Minister.

This region has been also ranked as the poorest under Multi Dimension Poverty Index (2020-21) of NITI Aayog. As per this 9.09 lakhs households of 36.38 lakh population are under MPI in Kalyan Karnataka region.

Hence, a proposal for grant of Rs. 5080 crores under different Central Sector Schemes has been enclosed for kind perusal. I earnestly request you to consider the same favourably in the forthcoming budget. This will go a long way in realising the dreams of Late Sri Sardar Vallabhbai Patel who brought Independence to this region from the exploitative clutches of erstwhile Nizam of Hyderabad.

With warm regards,

Yours sincerely,

(BASAVARAJ BOMMAI)

Smt. Nirmala Sitharaman
Hon'ble Minister of Finance and Corporate Affairs
Government of India
134, North Block
New Delhi-110 001.

Outcome based Interventions for upliftment of Kalyana Karnataka Region

Sl No	Activity	Unit Cost (Rs.)	Beneficiaries	Rs. Crore	Scheme	Remarks	SDGs
1	Providing Kuccha Housing	120,000	100,000	1,200	PMAY	Ensure that 1 lakh houses in KKR are Pucca Houses	SDG 1, SDG 11, SDG 8
2	Providing Literacy tor SC/ST women in SHG's	1,000	141,300	14	Padna Likna Abhiyan/ Saksharatha Mission	Enable all SC/ST women in SHGs of KKR to be literate	SDG 4, SDG 5, SDG 8, SDG 10
3	Alleviating Anaemia in Children (0 -5 yrs)	1,440	2,264,000	326	ICDS	22.6 lakh anaemic children in KKR	SDG 2, SDG 3
4	Alleviating Malnutrition in Children (0 -5 yrs)	1,710	5,821,000	995	ICDS	58 lakh children in KKR suffering from malnutrition	SDG 2, SDG 3
5	Alleviating Anaemia in Women (15 - 49 yrs)	2,160	6,034,200	1,303	ICDS	60.34 lakh women (15 - 49 yrs) in KKR suffering from anaemia	SDG 2, SDG 3, SDG 5
6	National Institute of Open Schooling - For educational empowerment of dropouts	2,400	400,000	96	ICDS	4 lakh dropouts in KKR	SDG 4, SDG 5, SDG 8, SDG 10
7	Skilling/ Upskilling Youth	15,000	103,400	155		Skilling/ upskilling to enable employment/ self - employment for 1.03 lakh unemployed youth (2.5% of youth population)	SDG 4, SDG 8, SDG 10
8	Providing Vocational / Skill labs at Government Girls schools to align with NEP	500,000	1,005	50	Gender Fund	Empower Girl students of Upper Primary, Secondary and Higher Secondary of KKR region with vocational skills (as per NEP)	SDG 4, SDG 5, SDG 8, SDG 10
9	Increasing farm income of 18 lakh farmers	100,000,000	7	70	Pradhan Mantri Kisan Sampada Yojana	Various Schemes for increasing farm income in KKR through Agro Processing, FPO etc	SDG 1, SDG 2, SDG 3, SDG 8
10	Afforestation for climate change	42,000	172,000	722	Green India Mission	Total 1,72,000 hectares have to be afforested	SDG 13, SDG 8
11	Industry Cluster for employment/ self-employment	21	7	147	MSME CDP	Various Schemes under MSME CDP in KKR	SDG 1, SDG 8, SDG 5, SDG 10, SDG 17
	Total			5,080			

Annexure-1